Akashvani : Bengaluru
National Bulletin In Kannada
23.11.2025 : 1310hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

23.11.2025 : 1310hrs

*******

ಮುಖ್ಯಾಂಶಗಳು

೧. ಜಿ-೨೦ ನಾಯಕರ ಶೃಂಗಸಭೆಗೆ ಇಂದು ತೆರೆ: ಮೂರನೇ ಅಧಿವೇಶನದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಷಣ

೨. ಭಾರತ-ಇಸ್ರೇಲ್ ಮುಕ್ತ ವ್ಯಾಪಾರ ಒಪ್ಪಂದ ಶೀಘ್ರ ಅನುಷ್ಠಾನಕ್ಕೆ ಕ್ರಮ; ದ್ವಿಪಕ್ಷೀಯ ವ್ಯಾಪಾರ - ಹೂಡಿಕೆ ಗಣನೀಯ ಏರಿಕೆ ನಿರೀಕ್ಷೆ

೩. ಸಂವಿಧಾನದ ೨೪೦ನೇ ವಿಧಿ ವ್ಯಾಪ್ತಿಯಡಿ ಚಂಡೀಗಢ ಕೇಂದ್ರಾಡಳಿತ ಪ್ರದೇಶವನ್ನು ಸೇರಿಸಲು ಕೇಂದ್ರ ಸರ್ಕಾರ ಪ್ರಸ್ತಾಪ

೪. ಆಸ್ಟ್ರೇಲಿಯನ್ ಓಪನ್ ಬ್ಯಾಡ್ಮಿಂಟನ್; ಪುರುಷರ ಸಿಂಗಲ್ಸ್ ಪ್ರಶಸ್ತಿ ಮುಡಿಗೇರಿಸಿಕೊಂಡ ಭಾರತದ ಲಕ್ಷ್ಯ ಸೇನ್

*****************

ಇಂದು ಜಿ-೨೦ ನಾಯಕರ ಶೃಂಗಸಭೆ ಸಮಾರೋಪಗೊಳ್ಳಲಿದೆ. ಶೃಂಗಸಭೆಯ ಮೂರನೇ ಅಧಿವೇಶನದಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಅಧಿವೇಶನಕ್ಕೂ ಮುನ್ನ ಪ್ರಧಾನಿ, ಭಾರತ-ಬ್ರೆಜಿಲ್-ದಕ್ಷಿಣ ಆಫ್ರಿಕಾ ನಾಯಕರ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಇಂದು ಶೃಂಗಸಭೆಯ ನೇಪಥ್ಯದಲ್ಲಿ ಪ್ರಧಾನಿ ಮೋದಿ ಅವರು ದಕ್ಷಿಣ ಆಫ್ರಿಕಾದ ಅಧ್ಯಕ್ಷ ಸಿರಿಲ್ ರಾಮಫೋಸಾ, ಜಪಾನ್ ಪ್ರಧಾನಿ ಸನೇ ಟಕಾ, ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಮತ್ತು ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ. ಅವರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ನಂತರ, ಸಂಜೆ, ಪ್ರಧಾನಿ ಮೋದಿ ನವದೆಹಲಿಗೆ ಮರಳಲಿದ್ದಾರೆ.

*****************

ಭಾರತಕ್ಕೆ ಜಿ-೨೦ ಶೃಂಗಸಭೆಯ ಮಹತ್ವವನ್ನು ವಿದೇಶಾಂಗ ಸಚಿವಾಲಯದ ಆರ್ಥಿಕ ಸಂಬಂಧಗಳ ಕಾರ್ಯದರ್ಶಿ ಸುಧಾಕರ್ ದಲೇಲಾ ಒತ್ತಿ ಹೇಳಿದ್ದಾರೆ. ಜೋಹನ್ಸ್‌ಬರ್ಗ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಅವರು, ವಿಪತ್ತು ಸ್ಥಿತಿಸ್ಥಾಪಕತ್ವ ಮತ್ತು ಪ್ರತಿಕ್ರಿಯೆಯನ್ನು ಬಲಪಡಿಸುವುದನ್ನು, ಕಡಿಮೆ ಆದಾಯ ದೇಶಗಳಿಗೆ ಸಾಲದ ಸುಸ್ಥಿರತೆಯನ್ನು ಖಚಿತಪಡಿಸುವುದು, ಸುಸ್ಥಿರ ಆರ್ಥಿಕ ಬೆಳವಣಿಗೆಗೆ ನಿರ್ಣಾಯಕ ಖನಿಜಗಳನ್ನು ಬಳಸಿಕೊಳ್ಳುವುದು ಮತ್ತು ನ್ಯಾಯಯುತ ಇಂಧನ ಪರಿವರ್ತನೆಗಾಗಿ ಹಣಕಾಸಿನ ವ್ಯವಸ್ಥೆ ಸೇರಿದಂತೆ ನಾಲ್ಕು ಪ್ರಮುಖ ಆದ್ಯತೆಗಳ ಕುರಿತು ಬಲವಾದ ಸಂದೇಶವನ್ನು ಈ ಶೃಂಗಸಭೆ ನೀಡಿದೆ ಎಂದು ಹೇಳಿದ್ದಾರೆ.

*****************

ಪ್ರಸ್ತಾಪಿತ ಮುಕ್ತ ವ್ಯಾಪಾರದ ಒಪ್ಪಂದದಿಂದಾಗಿ ಇಸ್ರೇಲ್‌ನೊಂದಿಗಿನ ಭಾರತದ ದ್ವಿಪಕ್ಷೀಯ ವ್ಯಾಪಾರ ಮತ್ತು ಹೂಡಿಕೆ ಗಣನೀಯ ಏರಿಕೆ ಕಾಣುವ ಸಾಧ್ಯತೆಯಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಇಸ್ರೇಲ್ ಪ್ರವಾಸದಲ್ಲಿರುವ ಸಚಿವರು, ಜೆರುಸಲೆಮ್‌ನಲ್ಲಿ ಮಾತನಾಡಿ, ಭಾರತ ಮತ್ತು ಇಸ್ರೇಲ್ ತಮ್ಮ ನಡುವಿನ ಮುಕ್ತ ವ್ಯಾಪಾರ ಒಪ್ಪಂದವನ್ನು ಎರಡು ಹಂತಗಳಲ್ಲಿ ಅನುಷ್ಠಾನಗೊಳಿಸುವ ಗುರಿ ಹೊಂದಿರುವುದರಿಂದ ಉಭಯ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ ವ್ಯಾಪಾರ ಹೆಚ್ಚಾಗುವುದರ ಜೊತೆಗೆ ನಾವೀನ್ಯತೆ, ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ಪರಸ್ಪರ ಸಂಬಂಧಗಳಲ್ಲಿ ಸುಧಾರಣೆ ಕಂಡು ಬರಲಿದೆ ಎಂದರು. ಈ ಒಪ್ಪಂದದ ಪ್ರತಿಫಲವನ್ನು ಶೀಘ್ರವಾಗಿ ಪಡೆಯಲು, ಮೊದಲ ಹಂತವನ್ನು ಶೀಘ್ರವಾಗಿ ಅಂತಿಮಗೊಳಿಸಲು ಉಭಯ ರಾಷ್ಟ್ರಗಳು ಉತ್ಸುಕವಾಗಿವೆ. ಉಭಯ ರಾಷ್ಟ್ರಗಳು ಬಿಕ್ಕಟ್ಟನ್ನು ಅವಕಾಶವನ್ನಾಗಿ ಪರಿವರ್ತಿಸುವುದು ಹೇಗೆಂದು ತಿಳಿದಿವೆ ಎಂದು ತಿಳಿಸಿದ್ದಾರೆ. ಸಚಿವರು, ಇಸ್ರೇಲ್ ವಾಣಿಜ್ಯ ಸಚಿವ ನಿರ್ ಬರ್ಕ್‌ತ್ ಅವರೊಂದಿಗೆ ಜೆರುಸಲೆಮ್‌ನಲ್ಲಿ ಆಯೋಜಿಸಿದ್ದ ವಿಶೇಷ ಕಾರ್ಯಕ್ರಮದಲ್ಲಿ ಭಾರತೀಯ ಸಮುದಾಯವನ್ನುದ್ದೇಶಿಸಿ ಮಾತನಾಡಿದರು. ಈ ವೇಳೆ ಅವರು, ಭಾರತ-ಇಸ್ರೇಲ್ ನಡುವಿನ ಬಲವಾದ ಬಾಂಧವ್ಯ ಮತ್ತು ಜನರಿಂದ ಜನರ ನಡುವಿನ ಸಂಬಂಧಗಳ ಕುರಿತು ಮಾತನಾಡಿದರು.

*****************

ಸಂವಿಧಾನದ ೨೪೦ನೇ ವಿಧಿ ವ್ಯಾಪ್ತಿಯಲ್ಲಿ ಚಂಡೀಗಢ ಕೇಂದ್ರಾಡಳಿತ ಪ್ರದೇಶವನ್ನು ಸೇರಿಸಲು ಕೇಂದ್ರ ಸರ್ಕಾರ ಪ್ರಸ್ತಾಪಿಸಿದೆ. ಈ ಉದ್ದೇಶಕ್ಕಾಗಿ ಸಂವಿಧಾನದ ೧೩೧ನೇ ತಿದ್ದುಪಡಿ ಮಸೂದೆ ೨೦೨೫ ಅನ್ನು ಮುಂಬರುವ ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಪರಿಚಯಿಸಲಾಗುವುದು ಎಂದು ಲೋಕಸಭೆ ಮತ್ತು ರಾಜ್ಯಸಭೆಯ ವಾರ್ತಾ ಪತ್ರದಲ್ಲಿ ತಿಳಿಸಲಾಗಿದೆ. ಪ್ರಸ್ತಾಪಿತ ಮಸೂದೆಯು, ಅಂಡಮಾನ್ ನಿಕೋಬಾರ್ ದ್ವೀಪಗಳು, ಲಕ್ಷದ್ವೀಪ, ದಾದ್ರಾ-ನಗರಹವೇಲಿ ಮತ್ತು ದಮನ್-ದಿಯು ಸೇರಿದಂತೆ ಮುಂತಾದ ಶಾಸಕಾಂಗಗಳಿಲ್ಲದ ಇತರ ಕೇಂದ್ರಾಡಳಿತ ಪ್ರದೇಶಗಳಂತೆಯೇ ಚಂಡೀಗಢವನ್ನು ಭಾರತದ ಸಂವಿಧಾನದ ೨೪೦ನೇ ವಿಧಿಯಡಿ ಸೇರಿಸಲು ಪ್ರಯತ್ನಿಸುತ್ತದೆ. ಪ್ರಸ್ತುತ ಪಂಜಾಬ್ ರಾಜ್ಯಪಾಲರೇ ಚಂಡೀಗಢದ ಆಡಳಿತಾಧಿಕಾರಿಯಾಗಿದ್ದು, ಈ ಪ್ರಸ್ತಾಪಿತ ಮಸೂದೆಯಿಂದ ಚಂಡೀಗಢದಲ್ಲಿ ಸ್ವತಂತ್ರ ಆಡಳಿತಗಾರರಿಗೆ ಬಾಗಿಲು ತೆರೆಯಲಿದೆ.

*****************

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದು ಆಂಧ್ರಪ್ರದೇಶದ ಪುಟ್ಟಪರ್ತಿಯ ಶ್ರೀ ಸತ್ಯಸಾಯಿ ಹಿಲ್ ವ್ಯೂ ಕ್ರೀಡಾಂಗಣದಲ್ಲಿ ನಡೆಯಲಿರುವ ಸತ್ಯಸಾಯಿ ಬಾಬಾ ಅವರ ಭವ್ಯ ಶತಮಾನೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ನಂತರ, ಉಪರಾ?ಪತಿಗಳು ಪಾಲಸಮುದ್ರಂನಲ್ಲಿರುವ ರಾಷ್ಟ್ರೀಯ ಕಸ್ಟಮ್ಸ್, ಪರೋಕ್ಷ ತೆರಿಗೆಗಳು ಮತ್ತು ಮಾದಕ ದ್ರವ್ಯಗಳ ಅಕಾಡೆಮಿಯ ಹೊಸ ಕ್ಯಾಂಪಸ್‌ಗೆ ಭೇಟಿ ನೀಡಲಿದ್ದಾರೆ ಮತ್ತು ಅವರ ವಿಶೇ? ಫೌಂಡೇಶನ್ ಕೋರ್ಸ್‌ಗೆ ಹಾಜರಾಗುತ್ತಿರುವ ಅಖಿಲ ಭಾರತ ಸೇವೆಗಳು ಮತ್ತು ಕೇಂದ್ರ ನಾಗರಿಕ ಸೇವೆಗಳ ಅಧಿಕಾರಿ ತರಬೇತಿದಾರರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

*****************

ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಇಂದು ನಿವೃತ್ತಿ ಹೊಂದಲಿದ್ದಾರೆ. ನ್ಯಾಯಮೂರ್ತಿ ಸೂರ್ಯಕಾಂತ್ ಅವರು ನೂತನ ಮುಖ್ಯ ನ್ಯಾಯಮೂರ್ತಿಯಾಗಿ ನಾಳೆ ಅಧಿಕಾರ ವಹಿಸಿಕೊಳ್ಳಲಿದ್ದಾರೆ. ಆರು ತಿಂಗಳಗಳ ಕಾಲ ನ್ಯಾಯಾಂಗದ ಉನ್ನತ ಹುದ್ದೆಯಲ್ಲಿದ್ದ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರು ಹಲವು ಮಹತ್ವದ ತೀರ್ಪುಗಳನ್ನು ನೀಡಿದ್ದಾರೆ.

*****************

ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್, ಉಕ್ರೇನ್ ವಿದೇಶಾಂಗ ಸಚಿವ ಆಂಡ್ರಿ ಸಿಬಿಹಾ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ರಷ್ಯಾ ಉಕ್ರೇನ್ ಸಂಘರ್ಷಕ್ಕೆ ಸಂಬಂಧಿಸಿದ ಬೆಳವಣಿಗೆಗಳ ಕುರಿತು ಮಾಹಿತಿ ನೀಡಿದ್ದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಇದೇ ವೇಳೆ, ಈ ಸಂಘರ್ಷವನ್ನು ಶೀಘ್ರವಾಗಿ ಕೊನೆಗೊಳಿಸಲು ಮತ್ತು ಶಾಶ್ವತ ಶಾಂತಿ ಸ್ಥಾಪನೆಗೆ ಭಾರತದ ಬೆಂಬಲವನ್ನು ಸಚಿವರು ಪುನರುಚ್ಚರಿಸಿದರು.

*****************

ದುಬೈ ಅಂತಾರಾಷ್ಟ್ರೀಯ ವೈಮಾನಿಕ ಪ್ರದರ್ಶನದ ಸಮಯದಲ್ಲಿ ಸಂಭವಿಸಿದ ತೇಜಸ್ ಯುದ್ಧ ವಿಮಾನ ದುರಂತದಲ್ಲಿ ಮೃತಪಟ್ಟ ಭಾರತೀಯ ವಾಯುಪಡೆಯ ಪೈಲೆಟ್ ವಿಂಗ್ ಕಮಾಂಡರ್ ನಮನ್ ಸ್ಯಾಲ್ ಅವರ ಪಾರ್ಥೀವ ಶರೀರವನ್ನು ಕೊಯಮತ್ತೂರಿನ ಸುಲೂರ್ ವಾಯುಪಡೆ ನಿಲ್ದಾಣಕ್ಕೆ ತರಲಾಯಿತು. ಈ ವೇಳೆ, ಸಹೋದ್ಯೋಗಿಗಳು ಮತ್ತು ಅಧಿಕಾರಿಗಳು ಭಾವಪೂರ್ಣ ಗೌರಮನಮನ ಸಲ್ಲಿಸಿದ್ದಾರೆ.

*****************

೫೬ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ - ಇಫೀ ಇಂದು ೪ನೇ ದಿನಕ್ಕೆ ಕಾಲಿಟ್ಟಿದ್ದು, ಚಲನಚಿತ್ರ, ಪ್ರತಿಭೆ ಮತ್ತು ಜಾಗತಿಕ ಭಾಗವಹಿಸುವಿಕೆಯ ಸಮ್ಮಿಲನವನ್ನು ಪ್ರದರ್ಶಿಸುತ್ತಿದೆ. ಚಲನಚಿತ್ರೋತ್ಸವದಲ್ಲಿ ಈ ಬಾರಿ ಅನುಪಮ್ ಖೇರ್ ಅವರ ತಾನ್ವಿ ದ ಗ್ರೇಟ್ ಚಿತ್ರಕ್ಕೆ ಮಹಾತ್ಮಾ ಗಾಂಧೀಜಿಯವರ ತತ್ವಗಳನ್ನು ಪ್ರತಿಪಾದಿಸುವ ಚಿತ್ರಗಳಿಗೆ ನೀಡಲಾಗುವ ಐಸಿಎಫ್‌ಟಿ ಯುನೆಸ್ಕೋ ಗಾಂಧಿ ಪದಕ ಎಂಬ ವಿಶೇಷ ಪ್ರಶಸ್ತಿಯನ್ನು ನೀಡಲಾಗುತ್ತಿದೆ. ಈ ನಡುವೆ ನಟ ಅನುಪಮ್ ಖೇರ್, ಜಮ್ಮು-ಕಾಶ್ಮೀರದೆಡೆಗೆ ತಮ್ಮ ಗಮನಹರಿಸುವಂತೆ ಚಲನಚಿತ್ರ ನಿರ್ಮಾಪಕರು ಸೇರಿದಂತೆ ಜಾಗತಿಕ ಚಲನಚಿತ್ರ ಸಮುದಾಯಕ್ಕೆ ಕರೆ ನೀಡಿದ್ದಾರೆ.

*****************

ಸಿಡ್ನಿಯಲ್ಲಿ ನಡೆದ ಆಸ್ಟ್ರೇಲಿಯನ್ ಓಪನ್ ಬ್ಯಾಡ್ಮಿಂಟನ್‌ನ ಪುರುಷರ ಸಿಂಗಲ್ಸ್ ಪ್ರಶಸ್ತಿಯನ್ನು ಭಾರತದ ಯುವ ಶಟ್ಲರ್ ಲಕ್ಷ್ಯ ಸೇನ್ ಮುಡಿಗೇರಿಸಿಕೊಂಡಿದ್ದಾರೆ. ಇಂದು ನಡೆದ ವೈಯಕ್ತಿಕ ವಿಭಾಗದ ಫೈನಲ್ ಪಂದ್ಯದಲ್ಲಿ ಅವರು, ಜಪಾನ್‌ನ ೨೬ ನೇ ಶ್ರೇಯಾಂಕಿತ ಯುಶಿ ತನಕಾ ಅವರನ್ನು ೨೧-೧೫, ೨೧-೧೧ ನೇರ ಸೆಟ್‌ಗಳ ಅಂತರದಲ್ಲಿ ಮಣಿಸಿ ಆಸ್ಟ್ರೇಲಿಯನ್ ಓಪನ್ ಪ್ರಶಸ್ತಿಗೆ ಮುತ್ತಿಕ್ಕಿದ್ದಾರೆ.

****************

ಸಾಗರದ ಹಲವು ಭಾಗಗಳಲ್ಲಿ ಪಾದರಸದ ಮಟ್ಟವು ಏರುತ್ತಿವೆ ಎಂದು ಹೊಸ ಅಧ್ಯಯನವು ಕಂಡುಹಿಡಿದಿದೆ. ೧೯೯೦ ಮತ್ತು ೨೦೨೧ ರ ನಡುವೆ ಬ್ರಿಟನ್ ಕರಾವಳಿಯಲ್ಲಿ ಸಿಲುಕಿಕೊಂಡಿದ್ದ ೭೩೮ ಬಂದರಿನ ಕಡಲ ಹಂದಿ ಅಥವಾ ಪೊರ್ಪೊಯಿಸ್‌ಗಳಿಂದ ಯಕೃತ್ತಿನ ಮಾದರಿಗಳನ್ನು ಅಧ್ಯಯನವು ವಿಶ್ಲೇಷಿಸಿದೆ.

****************

ಗುವಾಹಟಿಯ ಬರ್ಸಪಾರಾ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ-ದಕ್ಷಿಣ ಆಫ್ರಿಕಾ ಎರಡನೇ ಮತ್ತು ಅಂತಿಮ ಟೆಸ್ಟ್‌ನ ಎರಡನೇ ದಿನದಾಟದಲ್ಲಿಂದು ದಕ್ಷಿಣ ಆಫ್ರಿಕಾ ತನ್ನ ಮೊದಲ ಇನ್ನಿಂಗ್ಸ್‌ನ್ನು ಮುಂದುವರಿಸಿದ್ದು, ಇತ್ತೀಚಿನ ವರದಿ ಬಂದಾಗ ೭ ವಿಕೆಟ್ ನಷ್ಟಕ್ಕೆ ೪೨೫ ರನ್ ಗಳಿಸಿ ಆಡುತ್ತಿದೆ,

****************